ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಕಾರ್ಮಿಕರಿಗೆ ಅನುಕೂಲವಾಗುವಂತೆ ಮೊಬೈಲ್ ಕ್ಲಿನಿಕ್ ಸ್ಥಾಪನೆ ಬಗ್ಗೆ

ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು ):-

869 (951) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ನಗರ ಪ್ರದೇಶಗಳಲ್ಲಿ ದುಡಿಯುತ್ತಿರುವ ಕಟ್ಟಡ ಕಾರ್ಮಿಕರು ಮತ್ತು ಅವರ ಕುಟುಂಬಸ್ಥರಿಗೆ ಆರೋಗ್ಯ ರಕ್ಷಣೆ ನೀಡುವ ದೃಷ್ಟಿಯಿಂದ 10 "ಮೊಬೈಲ್ ಕ್ಲಿನಿಕ್" ಗಳನ್ನು ಪ್ರಾರಂಭಿಸಲಾಗಿದೆಯೇ ;

(ಆ) ಪ್ರಾರಂಭಿಸಿದ್ದಲ್ಲಿ, ಇದೂವರೆಗೂ ಎಷ್ಟು ಜನ ಕಾರ್ಮಿಕರು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ ;

(ಇ) ಈ ಯೋಜನೆ ಇನ್ನು ಪ್ರಾರಂಭಿಸದಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು; ವಿಳಂಬಕ್ಕೆ ಕಾರಣಗಳೇನು?